# ಕರ್ನಾಟಕ ವಿಧಾನ ಪರಿಷತ್ತು
## 151ನೇ ಅಧಿವೇಶನ
### *ಸಂತಾಪ ಸೂಚನೆಗಳು*

*ಮಾನ್ಯ ಸಭಾಪತಿಯವರು:-*

ಮಾಜಿ ಸಚಿವರು ಹಾಗೂ ವಿಧಾನಸಭೆ, ವಿಧಾನ ಪರಿಷತ್ತು, ಲೋಕಸಭೆ, ರಾಜ್ಯಸಭೆಯ ಮಾಜಿ ಸದಸ್ಯರು ಮತ್ತು ವಿಧಾನಸಭೆಯ ಮಾಜಿ ಸಭಾಧ್ಯಕ್ಷರಾಗಿದ್ದ ಶ್ರೀ ಡಿ.ಬಿ. ಚಂದ್ರೇಗೌಡ, ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಶ್ರೀ ಬಿ.ಎಸ್. ವಿಶ್ವನಾಥ್, ಹಿರಿಯ ವಿಜ್ಞಾನಿ ಪ್ರೊ: ಎಂ.ಆರ್. ಸತ್ಯನಾರಾಯಣರಾವ್, ಹಿರಿಯ ವಿಜ್ಞಾನಿ ಡಾ: ವಿ.ಎಸ್. ಅರುಣಾಚಲಂ, ಖ್ಯಾತ ಸಂಖ್ಯಾ ಶಾಸ್ತ್ರಜ್ಞರಾದ ಡಾ: ಕಲ್ಯಂಪುಡಿ ರಾಧಾಕೃಷ್ಣರಾವ್, ಹಸಿರು ಕ್ರಾಂತಿಯ ಹರಿಕಾರ ಡಾ: ಎಂ.ಎಸ್. ಸ್ವಾಮಿನಾಥನ್, ಹಿರಿಯ ರಂಗಭೂಮಿ ಹಾಗೂ ಚಲನಚಿತ್ರ ನಟಿ ಶ್ರೀಮತಿ ಮಮತಾ ಗುಡೂರ, ಹಿರಿಯ ಲೇಖಕಿ ಡಾ: ಕಮಲಾ ಹೆಮ್ಮಿಗೆ, ಹಿರಿಯ ಪತ್ರಕರ್ತರಾದ ಶ್ರೀ ಜಿ.ಎನ್. ರಂಗನಾಥ ರಾವ್ ಮತ್ತು ಹಿರಿಯ ಹಿಂದುಸ್ಥಾನಿ ಗಾಯಕ ಪ್ರೊ: ಹನುಮಣ್ಣನಾಯಕ ದೊರೆ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

### 1. ಡಿ.ಬಿ.ಚಂದ್ರೇಗೌಡ

**ಮಾಜಿ ಸಚಿವರು ಹಾಗೂ ವಿಧಾನಸಭೆ, ವಿಧಾನ ಪರಿಷತ್ತು, ಲೋಕಸಭೆ, ರಾಜ್ಯಸಭೆಯ ಮಾಜಿ ಸದಸ್ಯರು ಮತ್ತು ವಿಧಾನಸಭೆಯ ಮಾಜಿ ಸಭಾಧ್ಯಕ್ಷರಾಗಿದ್ದ ಶ್ರೀ ಡಿ.ಬಿ.ಚಂದ್ರೇಗೌಡ ಅವರು ದಿನಾಂಕ:07.11.2023ರಂದು ನಿಧನ ಹೊಂದಿರುತ್ತಾರೆ.**

1936ರ ಆಗಸ್ಟ್ 26ರಂದು ಮೂಡಿಗೆರೆ ತಾಲ್ಲೂಕಿನ ದಾರದಹಳ್ಳಿಯಲ್ಲಿ ಜನಿಸಿದ್ದ ಶ್ರೀಯುತರು ಬಿ.ಎಸ್ಸಿ., ಎಲ್.ಎಲ್.ಬಿ., ಪದವೀಧರರಾಗಿದ್ದು, ವೃತ್ತಿಯಲ್ಲಿ ವಕೀಲರಾಗಿದ್ದರು. ವಿದ್ಯಾರ್ಥಿ ದೆಶೆಯಲ್ಲಿಯೇ ನಾಯಕತ್ವ ಕೌಶಲ್ಯಗಳನ್ನು ಮೈಗೂಡಿಸಿಕೊಂಡಿದ್ದ ಶ್ರೀಯುತರು ಬೆಂಗಳೂರಿನ ರೇಣುಕಾ ಕಾಲೇಜಿನ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷರಾಗಿ ಆರ್.ಎಲ್. ಲಾ ಕಾಲೇಜಿನ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು. ರಾಷ್ಟ್ರ ರಾಜಕಾರಣದಲ್ಲಿ ಪ್ರಜಾಪ್ರಭುತ್ವದ ಗಟ್ಟಿ ಧ್ವನಿಯ ಪ್ರತಿಪಾದಕರಾಗಿದ್ದರು. ಪ್ರಜಾಪ್ರಭುತ್ವ, ಸಂವಿಧಾನ, ಪ್ರಜೆಗಳ ಸಮಸ್ಯೆಗಳ ಬಗ್ಗೆ ನಿಖರವಾಗಿ ಪ್ರತಿಪಾದಿಸಿ ಸಮಸ್ಯೆಗಳ ಪರಿಹಾರಕ್ಕೆ ಮಾರ್ಗೋಪಾಯಗಳನ್ನು

ಸೂಚಿಸುತ್ತಿದ್ದರು. ಅತ್ಯುತ್ತಮ ಸಂಸದೀಯ ಪಟು, ಆಳವಾದ ಅಧ್ಯಯನ, ಸಾಹಿತ್ಯ, ಸಾಹಿತಿಗಳ ಸಾಂಗತ್ಯದ ಮೂಲಕ ಉತ್ತಮ ವಾಗ್ಮಿ ಎನಿಸಿಕೊಂಡಿದ್ದರು. ವಿಶಿಷ್ಟ ಚಿಂತನೆ, ಅಪಾರ ಜ್ಞಾನ, ವಿಷಯದ ಕುರಿತು ಸಂಪೂರ್ಣ ಮಾಹಿತಿ ಹೊಂದಿರುತ್ತಿದ್ದ ಶ್ರೀಯುತರು ಸದನದಲ್ಲಿ ಸ್ವಪಕ್ಷೀಯರು ಮಾತ್ರವಲ್ಲದೆ ಪ್ರತಿಪಕ್ಷದವರನ್ನೂ ಸೆಳೆಯುತ್ತಿದ್ದರು. ತಾವು ಪ್ರತಿನಿಧಿಸುತ್ತಿದ್ದ ಚಿಕ್ಕಮಗಳೂರು ಲೋಕಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಿಂದ ಗೆದ್ದು ಪುನ: ಪ್ರಧಾನ ಮಂತ್ರಿಯಾಗಲು ಬಹುದೊಡ್ಡ ತ್ಯಾಗವನ್ನೆ ಮಾಡಿದರು.

1971ರಲ್ಲಿ ಪ್ರಥಮ ಬಾರಿಗೆ ಚಿಕ್ಕಮಗಳೂರು ಲೋಕಸಭೆ ಸದಸ್ಯರಾಗಿ, ಪುನ: 1977ರಲ್ಲಿ 2ನೇ ಬಾರಿಗೆ ಪುನರಾಯ್ಕೆಯಾದರು. 1978ರಲ್ಲಿ ಇಂದಿರಾ ಗಾಂಧಿಯವರಿಗಾಗಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರಕ್ಕೆ ರಾಜೀನಾಮೆ ನೀಡಿದ್ದರು. 1979ರಲ್ಲಿ ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾದ ಶ್ರೀಯುತರು ಸಣ್ಣ ನೀರಾವರಿ ಸಚಿವರಾಗಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸಿದ್ದರು. 7ನೇ ವಿಧಾನಸಭೆಗೆ ತೀರ್ಥಹಳ್ಳಿ ಕ್ಷೇತ್ರದಿಂದ ಚುನಾಯಿತರಾದ ಶ್ರೀಯುತರು 1983–1985ರವರೆಗೆ ವಿಧಾನಸಭೆಯ ಸಭಾಧ್ಯಕ್ಷರಾಗಿ, 1986ರಲ್ಲಿ ರಾಜ್ಯಸಭೆಯ ಸದಸ್ಯರಾಗಿ ಮತ್ತು 1999ರಲ್ಲಿ 11ನೇ ವಿಧಾನಸಭೆಗೆ ಪುನ: ತೀರ್ಥಹಳ್ಳಿ ಕ್ಷೇತ್ರದಿಂದ ಚುನಾಯಿತರಾಗಿ ಎಸ್.ಎಂ. ಕೃಷ್ಣ ಅವರ ಸಂಪುಟದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಹಾಗೂ 2009ರಲ್ಲಿ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಿಂದ, ಲೋಕಸಭೆಯ ಸದಸ್ಯರಾಗಿ ಸೇವೆಯನ್ನು ಸಲ್ಲಿಸಿರುತ್ತಾರೆ.

ಲೋಕಸಭೆ, ರಾಜ್ಯಸಭೆ, ವಿಧಾನಸಭೆ, ವಿಧಾನ ಪರಿಷತ್ ಹೀಗೆ ನಾಲ್ಕು ಸದನಗಳಿಗೂ ಆಯ್ಕೆಯಾದ ಕೆಲವೇ ರಾಜಕಾರಣಿಗಳಲ್ಲಿ ಶ್ರೀಯುತರು ಸಹ ಒಬ್ಬರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಒಬ್ಬ ಹಿರಿಯ ಸಂಸದೀಯ ಪಟು, ಅಧ್ಯಯನಶೀಲ ನೇತಾರರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 2. ಬಿ.ಎಸ್.ವಿಶ್ವನಾಥ್

**ಸಹಕಾರ ಕ್ಷೇತ್ರದ ಭೀಷ್ಮ ಎಂದು ಖ್ಯಾತರಾಗಿರುವ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಶ್ರೀ ಬಿ.ಎಸ್.ವಿಶ್ವನಾಥ್ ಅವರು ದಿನಾಂಕ:24.09.2023ರಂದು ನಿಧನ ಹೊಂದಿರುತ್ತಾರೆ.**

1934ರ ಜನವರಿ 6ರಂದು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಬಸರವಳ್ಳಿ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಬಿ.ಕಾಂ., ಎಫ್.ಬಿ.ಐ. ವಿದ್ಯಾರ್ಹತೆ ಹೊಂದಿದ್ದು, ಶ್ರೀ ರಾಮೇಶ್ವರ ರೈಸ್ ಮಿಲ್ಸ್‌ನ ಮಾಲೀಕರಾಗಿ ತಮ್ಮ ವೃತ್ತಿ ಜೀವನವನ್ನು ಪ್ರಾರಂಭಿಸಿದ್ದರು.

ಶ್ರೀಯುತರು 1970-76 ಮತ್ತು 1976-82ರವರೆಗೆ ಎರಡು ಅವಧಿಗೆ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾಗಿ ವಿಧಾನ ಪರಿಷತ್ತಿನ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ. ರಾಜ್ಯ ಭೂ ಅಭಿವೃದ್ಧಿ ಬ್ಯಾಂಕಿನ ನಿರ್ದೇಶಕರಾಗಿ, ಉಪಾಧ್ಯಕ್ಷರಾಗಿ ಹಾಗೂ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿರುವ ಶ್ರೀಯುತರು ರಾಷ್ಟ್ರೀಯ ಸಹಕಾರಿ ತರಬೇತಿ ಕೇಂದ್ರದ ಅಧ್ಯಕ್ಷರಾಗಿ, ಲಂಡನ್‌ನ ವಿಶ್ವ ಸಹಕಾರಿ ಒಕ್ಕೂಟದ ಕೇಂದ್ರ ಸಮಿತಿಯ ಸದಸ್ಯರಾಗಿ, ಇಫ್ಕೋ ಸಂಸ್ಥೆಯ ನಿರ್ದೇಶಕರಾಗಿ, ಅಖಿಲ ಭಾರತ ರಾಜ್ಯ ಸಹಕಾರಿ ಬ್ಯಾಂಕ್ ಒಕ್ಕೂಟದ ಮಂಡಳಿ ಸದಸ್ಯರಾಗಿ ಸಹಕಾರಿ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿರುತ್ತಾರೆ. ಭಾರತದ ರಾಷ್ಟ್ರೀಯ ಸಹಕಾರಿ ಯೂನಿಯನ್ ಪ್ರಾಯೋಜಿಸಿದ ಭಾರತೀಯ ನಿಯೋಗದ ಸದಸ್ಯರಾಗಿ ಜಪಾನ್, ಹಾಂಗ್‌ಕಾಂಗ್, ಲಂಡನ್, ಪ್ಯಾರೀಸ್ ಹಾಗೂ ಇನ್ನಿತರೆ ದೇಶಗಳಿಗೆ ಭೇಟಿ ನೀಡಿರುತ್ತಾರೆ. ಶ್ರೀಯುತರು ಸಹಕಾರಿ ಕ್ಷೇತ್ರದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಲ್ಲಿಸಿರುವ ಸೇವೆಗೆ 'ಗೋಲ್ಡನ್ ರೈಫಿಸನ್ ಪಿನ್' ಪ್ರಶಸ್ತಿ ಪಡೆದ ಮೊದಲ ಭಾರತೀಯರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಹಾಗೂ ಸಹಕಾರ ಕ್ಷೇತ್ರದ ದಿಗ್ಗಜ್ಜರೊಬ್ಬರನ್ನು ಕಳೆದುಕೊಂಡಾಂತಾಗಿದೆ.**

**3. ಪ್ರೊ:ಎಂ.ಆರ್. ಸತ್ಯನಾರಾಯಣರಾವ್**

**ಹಿರಿಯ ವಿಜ್ಞಾನಿಯಾದ ಪ್ರೊ: ಎಂ.ಆರ್.ಸತ್ಯನಾರಾಯಣರಾವ್ ಅವರು ದಿನಾಂಕ:13.08.2023 ರಂದು ನಿಧನ ಹೊಂದಿರುತ್ತಾರೆ.**

1948ರ ಜನವರಿ 21 ರಂದು ಮೈಸೂರಿನಲ್ಲಿ ಜನಿಸಿದ್ದ ಶ್ರೀಯುತರು ಬೆಂಗಳೂರು ವಿಶ್ವವಿದ್ಯಾಲಯದಿಂದ ಪದವಿ ಮತ್ತು ಸ್ನಾತಕೋತ್ತರ ಪದವಿ ಹಾಗೂ ಐಐಎಸ್‌ಸಿಯಲ್ಲಿ ಪಿಎಚ್.ಡಿ ಪದವಿ ಪಡೆದಿದ್ದರು.

ಜವಾಹರ್‌ಲಾಲ್ ನೆಹರೂ ಉನ್ನತ ವೈಜ್ಞಾನಿಕ ಸಂಶೋಧನಾ ಕೇಂದ್ರದ ಮಾಜಿ ಅಧ್ಯಕ್ಷರು, ಭಾರತೀಯ ವಿಜ್ಞಾನ ಸಂಸ್ಥೆಯ ಜೆನೆಟಿಕ್ ಎಂಜಿನಿಯರಿಂಗ್ ಮತ್ತು ಜೀವ ರಸಾಯನ ವಿಜ್ಞಾನ ವಿಭಾಗ ಕೇಂದ್ರದ ಮುಖ್ಯಸ್ಥರೂ ಆಗಿದ್ದ ಶ್ರೀಯುತರಿಗೆ ಪದ್ಮಶ್ರೀ, ಭಟ್ನಾಗರ್ ಸೇರಿದಂತೆ ಹಲವು ಪ್ರತಿಷ್ಠಿತ ಪ್ರಶಸ್ತಿಗಳು ಸಂದಿವೆ.

**ಶ್ರೀಯುತರ ನಿಧನದಿಂದಾಗಿ ರಾಷ್ಟ್ರವು ಒಬ್ಬ ಹಿರಿಯ ವಿಜ್ಞಾನಿಯನ್ನು ಕಳೆದುಕೊಂಡಂತಾಗಿದೆ.**

**4. ಡಾ:ವಿ.ಎಸ್.ಅರುಣಾಚಲಂ**

**ಭಾರತೀಯ ಹಿರಿಯ ವಿಜ್ಞಾನಿ ಡಾ:ವಿ.ಎಸ್.ಅರುಣಾಚಲಂ ಅವರು ದಿನಾಂಕ:16.08.2023ರಂದು ನಿಧನ ಹೊಂದಿರುತ್ತಾರೆ.**

1935ರ ನವೆಂಬರ್ 10 ರಂದು ಜನಿಸಿದ್ದ ಶ್ರೀಯುತರು ವಿಜ್ಞಾನದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು, ಮೆಟಿರಿಯಲ್ ಸೈನ್ಸ್ ಮತ್ತು ಇಂಜಿನಿಯರಿಂಗ್‌ನಲ್ಲಿ ಪಿಎಚ್.ಡಿ ಪದವಿಯನ್ನು ಪಡೆದಿದ್ದರು.

ಬಾಬಾ ಪರಮಾಣು ಕೇಂದ್ರ, ಬೆಂಗಳೂರಿನ ರಾಷ್ಟ್ರೀಯ ವೈಮಾನಿಕ ಪ್ರಯೋಗಾಲಯ ಮತ್ತು ಹೈದರಾಬಾದ್‌ನ ಡಿಫೆನ್ಸ್ ಮೆಟಲರ್ಜಿಕಲ್ ಸಂಶೋಧನಾ ಪ್ರಯೋಗಾಲಯದಲ್ಲಿ ವಿಜ್ಞಾನಿಯಾಗಿ, 1982 ಮತ್ತು 1992ರ ನಡವೆ ಭಾರತದ ರಕ್ಷಣಾ ಸಚಿವರ ವೈಜ್ಞಾನಿಕ ಸಲಹೆಗಾರರಾಗಿ, ರಕ್ಷಣಾ ಸಂಶೋಧನಾ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದ ಶ್ರೀಯುತರು ಪ್ರತಿಷ್ಠಿತ ವಿಜ್ಞಾನ, ತಂತ್ರಜ್ಞಾನ ಮತ್ತು ನೀತಿನಿರೂಪಣೆ ಅಧ್ಯಯನ ಕೇಂದ್ರವನ್ನು ಸ್ಥಾಪಿಸಿ, ಅಗ್ನಿ, ಆಕಾಶ್, ನಾಗ್ ಸೇರಿದಂತೆ ಹಲವು ಕ್ಷಿಪಣಿಗಳ ಅಭಿವೃದ್ಧಿ, ಲಘು ಯುದ್ಧವಿಮಾನ ತೇಜಸ್ ತಯಾರಿಕೆ ಯೋಜನೆಗಳಲ್ಲಿ ಪ್ರಮುಖ ಪಾತ್ರವಹಿಸಿದ ಇವರು ಹಲವಾರು ದಶಕಗಳ ಕಾಲ ವಿಜ್ಞಾನ ಕ್ಷೇತ್ರದಲ್ಲಿ ಕೊಡುಗೆ ನೀಡುವ ಮೂಲಕ ತಮ್ಮದೇ ಆದ ಛಾಪು ಮೂಡಿಸಿರುತ್ತಾರೆ.

ಭಾರತೀಯ ವಿಜ್ಞಾನಕ್ಕೆ ನೀಡಿದ ಕೊಡುಗೆಗಾಗಿ ಶ್ರೀಯುತರಿಗೆ ಪದ್ಮಭೂಷಣ ಮತ್ತು ಪದ್ಮವಿಭೂಷಣ, ಶಾಂತಿ ಸ್ವರೂಪ್ ಭಟ್ನಾಗರ್ ಸೇರಿದಂತೆ ಹಲವಾರು ಪ್ರಶಸ್ತಿಗಳು ಲಭಿಸಿವೆ.

**ಶ್ರೀಯುತರ ನಿಧನದಿಂದಾಗಿ ರಾಷ್ಟ್ರವು ಒಬ್ಬ ಹಿರಿಯ ವಿಜ್ಞಾನಿಯನ್ನು ಕಳೆದುಕೊಂಡಂತಾಗಿದೆ.**

## 5. ಡಾ:ಕಲ್ಯಂಪುಡಿ ರಾಧಾಕೃಷ್ಣರಾವ್

ಹಿರಿಯ ಗಣಿತ ಪಂಡಿತರು ಹಾಗೂ ಭಾರತದ ಖ್ಯಾತ ಸಂಖ್ಯಾಶಾಸ್ತ್ರಜ್ಞರಾದ ಡಾ:ಕಲ್ಯಂಪುಡಿ ರಾಧಾಕೃಷ್ಣರಾವ್ ಅವರು ದಿನಾಂಕ:23.08.2023ರಂದು ನಿಧನ ಹೊಂದಿರುತ್ತಾರೆ.

1920ರ ಸೆಪ್ಟಂಬರ್ 10ರಂದು ಬಳ್ಳಾರಿ ಜಿಲ್ಲೆಯ ಹೂವಿನ ಹಡಗಲಿಯಲ್ಲಿ ಜನಿಸಿದ್ದ ಶ್ರೀಯುತರು ಆಂಧ್ರದಲ್ಲಿ ಶಿಕ್ಷಣ ಮುಗಿಸಿ ಗಣಿತದಲ್ಲಿ ಪಿಎಚ್.ಡಿ ಪಡೆದು, ಕೋಲ್ಕತ್ತಾ ಮತ್ತು ಕೇಂಬ್ರಿಡ್ಜ್ ವಿಶ್ವವಿದ್ಯಾಲಯಗಳಲ್ಲಿ ಸಂಖ್ಯಾಶಾಸ್ತ್ರದಲ್ಲಿ ಉನ್ನತ ಪದವಿ ಪಡೆದಿದ್ದರು. ಗಣಿತದಲ್ಲಿ ವಿಶೇಷ ಪಾಂಡಿತ್ಯವುಳ್ಳ ಅವರು ಭಾರತದ ಜವಾಹರಲಾಲ್ ನೆಹರೂ ಹಾಗೂ ಬಫೆಲೋ ವಿಶ್ವವಿದ್ಯಾಲಯಗಳು ಸೇರಿದಂತೆ ಹಲವೆಡೆ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದ್ದರು.

19 ದೇಶಗಳಿಂದ 39 ಡಾಕ್ಟರೇಟ್ ಪಡೆದು, 477 ಸಂಶೋಧನಾ ಪ್ರಬಂಧಗಳನ್ನು ಮಂಡಿಸಿ, 15 ಪುಸ್ತಕಗಳನ್ನು ಬರೆದಿರುವ ಶ್ರೀಯುತರಿಗೆ 1968ರಲ್ಲಿ ಪದ್ಮಭೂಷಣ, 2001ರಲ್ಲಿ

ಪದ್ಮವಿಭೂಷಣ, 2002ರಲ್ಲಿ ಅಮೇರಿಕಾದ ಅತ್ಯುನ್ನತ ಪ್ರಶಸ್ತಿಯಾದ ನ್ಯಾಷನಲ್ ಮೆಡಲ್ ಆಫ್ ಸೈನ್ಸ್ ಪ್ರಶಸ್ತಿ, 2007ರಲ್ಲಿ ಪ್ರತಿಷ್ಠಿತ ಅಬೆಲ್ ಹಾಗೂ 2023ರಲ್ಲಿ ನೊಬೆಲ್‌ಗೆ ಸಮನಾದ ಇಂಟರ್ ನ್ಯಾಷನಲ್ ಪ್ರೈಜ್ ಆಫ್ ಸ್ಟಾಟಿಸ್ಟಿಕ್ಸ್ ಅಂತರರಾಷ್ಟ್ರೀಯ ಗೌರವ ಪ್ರಶಸ್ತಿಗಳು ಸಂದಿವೆ.

**ಶ್ರೀಯುತರ ನಿಧನದಿಂದಾಗಿ ರಾಷ್ಟ್ರವು ಒಬ್ಬ ಹಿರಿಯ ಗಣಿತ ಪಂಡಿತರನ್ನು ಕಳೆದುಕೊಂಡಂತಾಗಿದೆ.**

## 6. ಡಾ:ಎಂ.ಎಸ್. ಸ್ವಾಮಿನಾಥನ್

**ಹಿರಿಯ ಕೃಷಿ ವಿಜ್ಞಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರರಾದ ಡಾ:ಎಂ.ಎಸ್.ಸ್ವಾಮಿನಾಥನ್ ಅವರು ದಿನಾಂಕ:28.09.2023 ರಂದು ನಿಧನ ಹೊಂದಿರುತ್ತಾರೆ.**

1925ರ ಆಗಸ್ಟ್ 7ರಂದು ಜನರಲ್ ಸರ್ಜನ್ ಎಂ.ಕೆ.ಸಾಂಬಶಿವನ್ ಮತ್ತು ಪಾರ್ವತಿ ತಂಗಮ್ಮಾಳ್ ದಂಪತಿಗಳ ಮಗನಾಗಿ ಕುಂಭಕೋಣಂನಲ್ಲಿ ಜನಿಸಿದ್ದ ಇವರು ಕೃಷಿ ವಿಜ್ಞಾನದಲ್ಲಿ ಪದವಿಯನ್ನು, ಜೆನೆಟಿಕ್ಸ್ ಮತ್ತು ಸಸ್ಯ ತಳಿಗಳನ್ನು ಅಧ್ಯಯನ ಮಾಡಲು ನವದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ಸೈಟೋಜೆನೆಟಿಕ್ಸ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದು ಹೆಚ್ಚು ಇಳುವರಿ ನೀಡುವ ಗೋಧಿ ಮತ್ತು ಅಕ್ಕಿ ತಳಿಗಳ ಸಂಶೋಧನೆಯಲ್ಲಿ ಹಾಗೂ ರೈತ ಮಹಿಳೆಯರ ಸಬಲೀಕರಣದಲ್ಲಿ ಪ್ರಮುಖ ಪಾತ್ರವಹಿಸಿರುತ್ತಾರೆ.

ಆಹಾರ ಭದ್ರತೆಗಾಗಿ ದುಡಿದು ಕೃಷಿ ಕ್ಷೇತ್ರದ ವಿಶ್ವನಾಯಕರೆನಿಸಿದ್ದ ಶ್ರೀಯುತರು ಆರ್ಥಿಕ ಪರಿಸರದ ಪಿತಾಮಹ ಎಂದು ವಿಶ್ವಸಂಸ್ಥೆಯ ಪರಿಸರ ಯೋಜನೆ ಗುರುತಿಸಿರುವ ಶ್ರೀಯುತರಿಗೆ ಪದ್ಮಶ್ರೀ, ಪದ್ಮಭೂಷಣ, ಪದ್ಮವಿಭೂಷಣ, ರೇಮನ್ ಮ್ಯಾಗ್ಸೆಸೆ ಹಾಗೂ ಆಲ್ಬರ್ಟ್ ಐನ್‌ಸ್ಟೈನ್ ವಿಶ್ವವಿಜ್ಞಾನಗಳ ಪ್ರಶಸ್ತಿಗಳು ಸಂದಿವೆ.

**ಶ್ರೀಯುತರ ನಿಧನದಿಂದಾಗಿ ರಾಷ್ಟ್ರವು ಒಬ್ಬ ಹಿರಿಯ ಕೃಷಿ ವಿಜ್ಞಾನಿಯನ್ನು ಕಳೆದುಕೊಂಡಂತಾಗಿದೆ.**

## 7. ಮಮತಾ ಗುಡೂರ

**ಚಲನಚಿತ್ರ ನಟಿ ಶ್ರೀಮತಿ ಮಮತಾ ಗುಡೂರ ಅವರು ದಿನಾಂಕ:03.08.2023ರಂದು ನಿಧನ ಹೊಂದಿರುತ್ತಾರೆ.**

ಇಳಕಲ್ ತಾಲ್ಲೂಕಿನ ಗುಡೂರು ನಿವಾಸಿಯಾದ ಅವರು ರಂಗಭೂಮಿ ಕ್ಷೇತ್ರದಲ್ಲಿ 5 ದಶಕಗಳ ಕಾಲ 5 ಸಾವಿರಕ್ಕೂ ಹೆಚ್ಚು ನಾಟಕಗಳಲ್ಲಿ ಅಭಿನಯಿಸಿ, ಮನೆಗೆ ಬಂದ ಮಹಾಲಕ್ಷ್ಮಿ, ಅವಳ ನೆರಳು, ಗಣೇಶನ ಮದುವೆ ಸೇರಿದಂತೆ 25 ಚಲನಚಿತ್ರಗಳಲ್ಲಿ ನಟಿಸಿರುತ್ತಾರೆ.

2017ರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ರಂಗಭೂಮಿಯ ಹಿರಿಯ ಕಲಾವಿದೆ ಹಾಗೂ ಚಲನಚಿತ್ರ ನಟಿಯೊಬ್ಬರನ್ನು ಕಳೆದುಕೊಂಡಂತಾಗಿದೆ**

## 8. ಡಾ: ಕಮಲಾ ಹೆಮ್ಮಿಗೆ

**ಹಿರಿಯ ಲೇಖಕಿ ಹಾಗೂ ಸಂಶೋಧಕರಾಗಿದ್ದ ಡಾ: ಕಮಲಾ ಹೆಮ್ಮಿಗೆ ಅವರು ದಿನಾಂಕ:24.09.2023ರಂದು ನಿಧನ ಹೊಂದಿರುತ್ತಾರೆ.**

1952ರ ನವೆಂಬರ್ 20ರಂದು ಮೈಸೂರು ಜಿಲ್ಲೆಯ ಹೆಮ್ಮಿಗೆಯಲ್ಲಿ ಜನಿಸಿದ ಶ್ರೀಯುತರು ಮೈಸೂರು ವಿಶ್ವವಿದ್ಯಾನಿಲಯದಿಂದ ಕನ್ನಡ ಜಾನಪದದಲ್ಲಿ ಎಂ.ಎ. ಪದವಿ ಹಾಗೂ ಸ್ನಾತಕೋತ್ತರ ಭಾಷಾಂತರ ಡಿಪ್ಲೋಮಾ ಪಡೆದಿದ್ದರು. ಸವದತ್ತಿ ಎಲ್ಲಮ್ಮ ಮತ್ತು ದೇವದಾಸಿ ಪದ್ಧತಿಯ ಮೇಲೆ ಮಹಾಪ್ರಬಂಧ ರಚಿಸಿ ಪಿಎಚ್.ಡಿ ಪದವಿ ಪಡೆದಿದ್ದ ಶ್ರೀಯುತರು ಆಕಾಶವಾಣಿಯ ಧಾರವಾಡ ಮತ್ತು ಮಂಗಳೂರು ಕೇಂದ್ರಗಳಲ್ಲಿ ಹಾಗೂ ದೂರದರ್ಶನದ ಬೆಂಗಳೂರು ಮತ್ತು ಕೇರಳದ ತಿರುವನಂತಪುರದ ಕೇಂದ್ರಗಳಲ್ಲಿ ತಮ್ಮ ವೃತ್ತಿ ಜೀವನ ನಡೆಸುತ್ತಿದ್ದರು.

ಶ್ರೀಯುತರ ಕೃತಿಗಳಲ್ಲಿ ಅನಾಥಪ್ರಜ್ಞೆ ಹಾಗೂ ರಮ್ಯಪ್ರಜ್ಞೆ ಎರಡು ಒಟ್ಟಿಗೆ ಕಾಣಿಸಿಕೊಳ್ಳುವುದು ವಿಶೇಷತೆಯಾಗಿತ್ತು. ಇವರ ಕವನಸಂಕಲನ, ಸಣ್ಣ ಕಥೆಗಳು ಹಾಗೂ ಸಂಶೋಧನಾ ಕೃತಿಗಳು ಕನ್ನಡ ಸಾಹಿತ್ಯ ಲೋಕಕ್ಕೆ ಕೊಡುಗೆಗಳಾಗಿವೆ. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕೆ.ಎಸ್.ಎನ್. ಪ್ರಶಸ್ತಿ, ಕರ್ನಾಟಕ ರಾಜ್ಯ ಸರ್ಕಾರದ ಕಿತ್ತೂರು ಚೆನ್ನಮ್ಮ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸಾಹಿತ್ಯ ಶ್ರೀ ಪ್ರಶಸ್ತಿ ಹಾಗೂ ಇನ್ನಿತರೆ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀಯುತರ ನಿಧನದಿಂದ ರಾಜ್ಯವು ಒಬ್ಬ ಹಿರಿಯ ಲೇಖಕಿಯನ್ನು ಕಳೆದುಕೊಂಡಂತಾಗಿದೆ.**

## 9. ಜಿ.ಎನ್. ರಂಗನಾಥ ರಾವ್

**ಹಿರಿಯ ಪತ್ರಕರ್ತರು ಹಾಗೂ ಪ್ರಜಾವಾಣಿ ಪತ್ರಿಕೆಯ ನಿವೃತ್ತ ಕಾರ್ಯನಿರ್ವಾಹಕ ಸಂಪಾದಕರಾಗಿದ್ದ ಶ್ರೀ ಜಿ.ಎನ್.ರಂಗನಾಥರಾವ್ ಅವರು ದಿನಾಂಕ:09.10.2023ರಂದು ನಿಧನ ಹೊಂದಿರುತ್ತಾರೆ.**

1942ರಲ್ಲಿ ಬೆಂಗಳೂರು ಜಿಲ್ಲೆಯ ಹಾರೋಹಳ್ಳಿ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಹೊಸಕೋಟೆ ಹಾಗೂ ಬೆಂಗಳೂರು ನಗರದಲ್ಲಿ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸಿ, ಸಂಯುಕ್ತ ಕರ್ನಾಟಕ ದಿನ ಪತ್ರಿಕೆಯಲ್ಲಿ ಉಪ ಸಂಪಾದಕರಾಗಿ ವೃತ್ತಿ ಜೀವನ ಆರಂಭಿಸಿ, ನಂತರ ಪ್ರಜಾವಾಣಿ ದಿನಪತ್ರಿಕೆಗಳಲ್ಲಿ ಕಾರ್ಯನಿರ್ವಾಹಕ ಸಂಪಾದಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು.

ಶ್ರೀಯುತರು ಸಣ್ಣ ಕಥೆ, ಕಾದಂಬರಿ, ನಾಟಕ ಪ್ರಬಂಧ ಸೇರಿ ಮೂವತ್ತಕ್ಕೂ ಹೆಚ್ಚು ಕೃತಿಗಳನ್ನು ರಚಿಸಿ, ಪತ್ರಿಕೋದ್ಯಮದ ವಿದ್ಯಾರ್ಥಿಗಳ ಅಧ್ಯಯನಕ್ಕೆ ಪೂರಕವಾಗುವ ಕೃತಿಗಳನ್ನು ರಚಿಸಿರುತ್ತಾರೆ. ಹೊಸ ತಿರುವು, ಮಾಸ್ತಿಯವರ ನಾಟಕಗಳು, ಒಳನೋಟ, ಹಿಂದಣ ಹೆಜ್ಜೆ, ಅನ್ಯೋನ್ಯ, ಗುಣ–ದೋಷ ಇವುಗಳು ಶ್ರೀಯುತರ ಪ್ರಮುಖ ವಿಮರ್ಶಾ ಕೃತಿಗಳಾಗಿರುತ್ತವೆ.

ಶೇಕ್ಸ್‌ಪಿಯರ್‌ನ ರೋಮಿಯೋ ಜುಲಿಯೆಟ್. ಅಂಟನಿ ಕ್ಲಿಯೋಪಾಟ್ರ, ಬ್ರೆಕ್ಟ್‌ನ ಚಾಕ್ ಸರ್ಕಲ್, ಓ ಹೆನ್ರಿ ಕತೆಗಳು, ಜೆ.ಡಿ.ಬರ್ನಾಲ್‌ನ ಸೋಶಿಯಲ್ ಸೈನ್ಸ್ ಇನ್ ಹಿಸ್ಟರಿ, ರಾಮಚಂದ್ರ ಗುಹಾ ಅವರ ಇಂಡಿಯಾ ಆಫ್ಟರ್ ಗಾಂಧಿ, ಮೇಕರ್ಸ್ ಆಫ್ ಮಾರ್ಡನ್ ಇಂಡಿಯಾ ಹಾಗೂ ಖಲೀಲ್ ಗಿಬ್ರಾನ್‌ನ ಕಾಲಾತೀತ ವಿಖ್ಯಾತ ಇವುಗಳು ಶ್ರೀಯುತರು ಅನುವಾದಿಸಿರುವ ಕೃತಿಗಳು.

ಶ್ರೀಯುತರು ಖಾದ್ರಿ ಶಾಮಣ್ಣ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ನಾಟಕ ಅಕಾಡೆಮಿ ಫೆಲೋಷಿಪ್, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಹಾಗೂ ಇನ್ನಿತರೆ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಸಾಹಿತಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 10. ಹನುಮಣ್ಣನಾಯಕ ದೊರೆ

**ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಹಾಗೂ ಹಿರಿಯ ಹಿಂದೂಸ್ತಾನಿ ಗಾಯಕ ಪ್ರೊ:ಹನುಮಣ್ಣ ನಾಯಕ ದೊರೆ ಅವರು ದಿನಾಂಕ:09.11.2023ರಂದು ನಿಧನ ಹೊಂದಿರುತ್ತಾರೆ.**

1948ರ ಡಿಸೆಂಬರ್ 10ರಂದು ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ತೆಗ್ಗಿಹಾಳ ಗ್ರಾಮದಲ್ಲಿ ಜನಿಸಿದ ಶ್ರೀಯುತರು ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಂಗೀತ ಮತ್ತು ನೃತ್ಯ ವಿಭಾಗದಲ್ಲಿ ನಾನಾ ಹುದ್ದೆ ಅಲಂಕರಿಸಿ ಕೆಲಕಾಲ ಕಲಬುರಗಿ ಡಾ:ಶರಣಬಸಪ್ಪ ವಿಶ್ವವಿದ್ಯಾಲಯದ ಸಂಗೀತ ವಿಭಾಗದ ಮುಖ್ಯಸ್ಥರಾಗಿ, ಮೈಸೂರಿನ ಡಾ:ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಸಂಸ್ಥಾಪಕ ಕುಲಪತಿ ಹಾಗೂ ಜರ್ಮನಿಯ ವುಜ್‌ಬರ್ಗ್ ವಿಶ್ವವಿದ್ಯಾಲಯದ ಸಂಗೀತ ವಿಭಾಗದ ಸಂದರ್ಶಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿರುತ್ತಾರೆ. ರಾಗದೀಪಿಕೆ ಹಾಗೂ ವಚನದೀಪಿಕೆ ಅವರ ಪ್ರಮುಖ ಕೃತಿಗಳಾಗಿರುತ್ತವೆ.

ಶ್ರೀಯುತರಿಗೆ ರಾಜ್ಯೋತ್ಸವ ಪ್ರಶಸ್ತಿ, ಗಾನಗಂಧರ್ವ ಪ್ರಶಸ್ತಿ, ವಿಶ್ವೇಶ್ವರಯ್ಯ ಪ್ರಶಸ್ತಿ ಹಾಗೂ ಚಂದ್ರಹಾಸ ಪ್ರಶಸ್ತಿಗಳು ಸಂದಿವೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಹಿಂದೂಸ್ಥಾನಿ ಗಾಯಕರೊಬ್ಬರನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-**

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

**ಕರ್ನಾಟಕ ವಿಧಾನ ಪರಿಷತ್ತು**
**151ನೇ ಅಧಿವೇಶನ**
**ಸಂತಾಪ ಸೂಚನೆಗಳು**

**ಮಾನ್ಯ ಸಭಾಪತಿಯವರು:-**

ಕ್ಯಾಪ್ಟನ್ ಎಂ.ವಿ.ಪ್ರಾಂಜಲ್ ಹಾಗೂ ವೀರ ಯೋಧರುಗಳು ದಿನಾಂಕ:22.11.2023ರಂದು ನಿಧನ ಹೊಂದಿರುತ್ತಾರೆ.

1996ರಲ್ಲಿ ಕರ್ನಾಟಕದ ಮಂಗಳೂರು ಜಿಲ್ಲೆಯಲ್ಲಿ ಜನಿಸಿದ್ದ ಶ್ರೀಯುತರು ಪದವಿಪೂರ್ವ ಶಿಕ್ಷಣದ ನಂತರ ಕೆಮಿಕಲ್ ಇಂಜಿನಿಯರಿಂಗ್ ಅಧ್ಯಯನಕ್ಕಾಗಿ ಬೆಂಗಳೂರಿನ ಆರ್.ವಿ.ಕಾಲೇಜಿನಲ್ಲಿ ಸೇರಿದ್ದರೂ ಸೈನ್ಯದಲ್ಲಿ ಸೇವೆ ಸಲ್ಲಿಸುವ ಮಹಾದಾಸೆ ಹೊಂದಿದ್ದ ಇವರು ಎನ್‌ಡಿಎ ಸೇರುವ ಮೂಲಕ ದೇಶ ಸೇವೆಗೆ ಅಡಿಯಿಟ್ಟವರು. ಅವರ ಸಂಯಮದ ನುಡಿ, ದೇಶ ಪ್ರೇಮ, ಹಿರಿಯರಿಗೆ ನೀಡುತ್ತಿದ್ದ ಗೌರವ ಅಪಾರವಾಗಿತ್ತು. ಜಮ್ಮು ಕಾಶ್ಮೀರದ ರಜೌರಿ ಜಿಲ್ಲೆಯಲ್ಲಿ ಸೇನಾಪಡೆ ಮತ್ತು ಉಗ್ರರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಕ್ಯಾಪ್ಟನ್ ಪ್ರಾಂಜಲ್ ಸೇರಿದಂತೆ ಕ್ಯಾಪ್ಟನ್ ಶುಭಂ ಗುಪ್ತಾ, ಹವಲ್ದಾರ ಅಬ್ದುಲ ಮಜಿಕ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಸಚಿನ್ ಲಾರ್ ಈ ಐದು ವೀರ ಯೋಧರುಗಳು ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿ ಹುತಾತ್ಮರಾಗಿರುತ್ತಾರೆ.

ಇವರುಗಳ ನಿಧನದಿಂದಾಗಿ ರಾಷ್ಟ್ರವು ಅಪ್ರತಿಮ ವೀರ ಯೋಧರುಗಳನ್ನು ಕಳೆದುಕೊಂಡಂತಾಗಿದೆ.

**02. ಗಜರಾಜ ಅರ್ಜುನ**

**ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ "ಅರ್ಜುನ" ದಿನಾಂಕ:04.12.2023ರಂದು ಅಕಾಲಿಕ ನಿಧನ ಹೊಂದಿರುತ್ತದೆ.**

ಬಲಶಾಲಿ, ಮಾಸ್ಟರ್ ಹಾಗೂ ಹಿರಿಯ ಎಂಬ ಹೆಸರುಗಳಿಂದ ಖ್ಯಾತನಾಗಿದ್ದ ಅರ್ಜುನನನ್ನು 1968ರಲ್ಲಿ ಖೆಡ್ಡಾ ವಿಧಾನದಲ್ಲಿ ಕಾಕನಕೋಟೆ ಅರಣ್ಯ ಪ್ರದೇಶದಲ್ಲಿ ಸೆರೆ ಹಿಡಿಯಲಾಗಿದ್ದು, 22 ವರ್ಷಗಳಿಂದ ನಾಡಹಬ್ಬ ಮೈಸೂರು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುತ್ತಿತ್ತು. 2012ರಿಂದ

2019ರವರೆಗೆ 8 ಬಾರಿ ನಾಡ ಹಬ್ಬದ ಪ್ರಮುಖ ಆಕರ್ಷಣೆಯಾದ "ಜಂಬೂಸವಾರಿ"ಯಲ್ಲಿ ಚಿನ್ನದ ಅಂಬಾರಿಯನ್ನು ಹೊತ್ತು ತನ್ನ ರಾಜಗಾಂಭೀರ್ಯದ ನಡಿಗೆಯ ಮೂಲಕ ದಸರೆಯ ಮೆರುಗಿಗೆ ಕೇಂದ್ರ ಬಿಂದುವಾಗಿ ನಾಡಿನ ಜನತೆಯ ಪ್ರೀತಿಗೆ ಪಾತ್ರವಾಗಿತ್ತು. 60 ವರ್ಷದ ನಂತರ ಚಿನ್ನದ ಅಂಬಾರಿ ಹೊರುವ ಕೆಲಸದಿಂದ ನಿವೃತ್ತಿ ಹೊಂದಿ ಈ ಬಾರಿ ದಸರಾ ಮೆರವಣಿಗೆಯಲ್ಲಿ ದಿಕ್ಕು ತೋರುವ "ನಿಶಾನೆ ಆನೆ"ಯಾಗಿ ಸಾಗಿದ್ದ "ಅರ್ಜುನ" ನಾಡಿನ ಜನತೆಯ ಮನಸೂರೆಗೊಂಡಿತ್ತು. ಸಕಲೇಶ್ವರ ತಾಲ್ಲೂಕಿನ ಯಸಳೂರಿನಲ್ಲಿ ಕಾಡಾನೆಯನ್ನು ಹಿಡಿಯುವ ಕಾರ್ಯಾಚರಣೆ ವೇಳೆಯಲ್ಲಿ ಆಕಸ್ಮಿಕವಾಗಿ ಗಾಯಗೊಂಡು ಮೃತಪಟ್ಟಿರುತ್ತದೆ.

ಮೈಸೂರು ದಸರಾ ಅಂಬಾರಿ ಹೊರುವ ಕಾಯಕವನ್ನು ಅತ್ಯಂತ ಶೀವಿಯಿಂದ ನಿರ್ವಹಿಸಿ ಎಲ್ಲರ ಮೆಚ್ಚುಗೆಗೆ ಪಾತ್ರನಾಗಿದ್ದ ಹೆಮ್ಮೆಯ ಅರ್ಜುನನ ನಿಧನದಿಂದಾಗಿ ರಾಜ್ಯವು ರಾಜಗಾಂಭೀರ್ಯದ ಗಜರಾಜನನ್ನು ಕಳೆದುಕೊಂಡು ಶೋಕದ ಮಡುವಿನಲ್ಲಿ ಮುಳುಗಿದೆ.

**ಮೈಸೂರು ದಸರಾ ಅಂಬಾರಿ ಹೊತ್ತ ಅರ್ಜುನನ ನಿಧನದಿಂದಾಗಿ ರಾಜ್ಯವು ಪ್ರೀತಿ ಪಾತ್ರದ ಗಜರಾಜನನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-**

ವೀರ ಯೋಧರುಗಳ ಹಾಗೂ ವೀರ ಅರ್ಜುನನ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ವೀರ ಯೋಧರ ಅಗಲಿಕೆಯ ನೋವವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೌನ ಆಚರಿಸಿದ ನಂತರ)

**ಕರ್ನಾಟಕ ವಿಧಾನ ಪರಿಷತ್ತು**
**151ನೇ ಅಧಿವೇಶನ**
**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:-**

ಕನ್ನಡ ಚಲನಚಿತ್ರ ರಂಗದ ಅಪರೂಪದ ಸಾಧಕಿ, ನಟಿ ಲೀಲಾವತಿ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

ಲೀಲಾವತಿ

ಕನ್ನಡ ಚಲನ ಚಿತ್ರರಂಗದ ಅಭಿಜಾತ ಕಲಾವಿದೆ ಶ್ರೀಮತಿ ಲೀಲಾವತಿ ಅವರು ದಿನಾಂಕ:08.12.2023ರಂದು ನಿಧನ ಹೊಂದಿರುತ್ತಾರೆ.

1938ರಲ್ಲಿ ಕರ್ನಾಟಕದ ಮಂಗಳೂರು ಜಿಲ್ಲೆಯ ಬೆಳ್ತಂಗಡಿಯಲ್ಲಿ ಜನಿಸಿದ್ದ ಶ್ರೀಯುತರು ಸುಬ್ಬಯ್ಯ ನಾಯ್ಡು ಕಂಪನಿಯಲ್ಲಿ ಕಲಾವಿದೆಯಾಗಿ ಪಾತ್ರಗಳನ್ನು ನಿರ್ವಹಿಸಿ, ರಂಗಭೂಮಿ ಕಲಾವಿದೆಯಾಗಿ ಪರಿಪಕ್ವಗೊಂಡ ಇವರು 1949ರಲ್ಲಿ ನಾಗಕನ್ನಿಕೆ ಚಿತ್ರದ ಸಖಿ ಪಾತ್ರದ ಮೂಲಕ ಕನ್ನಡ ಚಲನಚಿತ್ರ ರಂಗವನ್ನು ಪ್ರವೇಶಿಸಿ, ಮಂಗಲ್ಯಯೋಗ ಚಿತ್ರದ ಮೂಲಕ ನಾಯಕಿ ನಟಿಯಾಗಿ ಬೆಳ್ಳಿ ಪರದೆ ಮೇಲೆ ರಾರಾಜಿಸಿದ್ದರು. ಕಡು ಬಡತನದಲ್ಲೇ ಬೆಳೆದು ಸಾಧನೆಗೈದ ಸಾಧಕಿಯಾಗಿದ್ದರು. 600ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ಅಭಿನಯಿಸಿದ ಶ್ರೀಯುತರು 400ಕ್ಕೂ ಹೆಚ್ಚು ಕನ್ನಡ ಚಲನಚಿತ್ರಗಳಲ್ಲಿ ಅಭಿನಯಿಸಿದ್ದಾರೆ. ಕನ್ನಡ, ತೆಲುಗು, ಮಲಯಾಳಂ ಮತ್ತು ತುಳು ಭಾಷೆಯ ಚಲನಚಿತ್ರಗಳಲ್ಲಿ ಅಭಿನಯಿಸಿರುವ ಇವರು ಬಹು ಭಾಷಾ ಕಲಾವಿದೆಯಾಗಿ ಬೆಳ್ಳಿ ಪರಧೆಯಲ್ಲಿ ಮಿನುಗಿದ ನಕ್ಷತ್ರವಾಗಿದ್ದರು. 5 ದಶಕಗಳ ಸುದೀರ್ಘ ಬಣ್ಣದ ಲೋಕದಲ್ಲಿ ಅಪ್ರತಿಮ ಕಲಾವಿದೆಯಾಗಿ ಮೆರೆದ ಮೇರು ಪರ್ವತವಾಗಿದ್ದರು. ಚಲನಚಿತ್ರ ರಂಗದ ಸೂಪರ್‌ಸ್ಟಾರ್‌ಗಳಾದ ಡಾ:ರಾಜ್‌ಕುಮಾರ್, ಎಂ.ಟಿ.ಆರ್, ಎ.ಎನ್.ಆರ್, ತಮಿಳಿನ ಶಿವಾಜಿ ಗಣೇಶ್ ಮತ್ತು ಎಂ.ಜಿ.ಆರ್. ಅವರುಗಳ ಜೊತೆ ನಾಯಕಿ ನಟಿಯಾಗಿ ಅಭಿನಯಿಸಿದ ಇವರು ಮಾಡದ ಪಾತ್ರಗಳಿಲ್ಲ. 60ರ ದಶಕದಲ್ಲಿ ನಾಯಕರುಗಳಿಗಿಂತಲೂ ಹೆಚ್ಚು ಸಂಭಾವನೆ ಪಡೆಯುವ ನಟಿಯಾಗಿದ್ದರು. ಕನ್ನಡದ ಮೇರು ನಟರಾದ ಡಾ:ರಾಜ್‌ಕುಮಾರ್ ಅವರ ಚಲನಚಿತ್ರಗಳಲ್ಲಿ ಖಾಂ ನಟಿಯಾಗಿದ್ದರು. ಅವರ ಚಿತ್ರದ ಹಾಡುಗಳು ಎಂದೆಂದಿಗೂ ಜನಪ್ರಿಯವಾಗಿ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದಿವೆ. ಕುಲವಧು ಸಿನಿಮಾದಲ್ಲಿ ಲೀಲಾವತಿಯವರು ನಟಿಸಿರುವ ಯುಗ-ಯುಗಾದಿ ಕಳೆದರೂ ಯುಗಾದಿ

ಮರಳಿ ಬರುತಿದೆ ಎಂಬ ಹಾಡು ನಮ್ಮ ಸಮಾಜ ಯುಗಾದಿ ಆಚರಿಸುವಷ್ಟೂ ದಿನ ಕಣ್ಣ ಮುಂದೆ ಬಂದೇ ಬರುತ್ತದೆ. ಸ್ನೇಹಮಯಿ, ಮೃದು ಸ್ವಭಾವ, ಮಾತೃ ಹೃದಯಿ ವ್ಯಕ್ತಿತ್ವ ಹೊಂದಿದ್ದ ಇವರು ಸಮಾಜ ಸೇವೆಯಲ್ಲಿಯೂ ಎತ್ತಿದ ಕೈಯಾಗಿದ್ದರು. ಸೋಲದೇವನಹಳ್ಳಿಯಲ್ಲಿ ಸ್ವಂತ ಹಣದಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪಶು ಚಿಕಿತ್ಸಾ ಕೇಂದ್ರವನ್ನು ನಿರ್ಮಿಸಿದ ಕೀರ್ತಿಗೆ ಭಾಜನರಾಗಿದ್ದಾರೆ. ತಮ್ಮ ಜೀವನದ ಕೊನೆಯವರೆವಿಗೂ ಭೂ ತಾಯಿಯ ಸೇವೆ ಮಾಡಿದ ಮಣ್ಣಿನ ಮಗಳಾಗಿದ್ದರು.

ಮದುವೆ ಮಾಡಿ ನೋಡು, ಸಂತ ತುಕಾರಾಂ ಚಿತ್ರಗಳಲ್ಲಿನ ನಟನೆಗೆ ಅವರಿಗೆ ರಾಷ್ಟ್ರ ಪ್ರಶಸ್ತಿ, ತುಂಬಿದಕೊಡ, ಮಹಾತ್ಯಾಗ, ಭಕ್ತಕುಂಬಾರ, ಸಿಪಾಯಿ ರಾಮು, ಗೆಜ್ಜೆಪೂಜೆ ಸಿನಿಮಾದ ನಟನೆಗಾಗಿ ರಾಜ್ಯ ಪ್ರಶಸ್ತಿ, ಡಾ:ರಾಜ್‌ಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, ಪೋಷಕ ನಟನೆಗಾಗಿ ಮೂರು ಬಾರಿ ಅತ್ಯುತ್ತಮ ಪೋಷಕ ನಟಿ ಪ್ರಶಸ್ತಿ, 2008ರಲ್ಲಿ ತುಮಕೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರಶಸ್ತಿ ಹೀಗೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

ಇವರ ನಿಧನದಿಂದಾಗಿ ಕನ್ನಡ ಚಲನಚಿತ್ರ ರಂಗ ಬೆಳ್ಳಿಪರದೆಯ ಧ್ರುವತಾರೆಯೊಂದನ್ನು ಕಳೆದುಕೊಂಡಂತಾಗಿದೆ.

**<u>ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>**

ಇವರ ಅಗಲಿಕೆಯ ನೋವವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೌನ ಆಚರಿಸಿದ ನಂತರ)